# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1105 (1335) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಮಧು ಜಿ ಮಾದೇಗೌಡ |
| ಉತ್ತರಿಸುವ ದಿನಾಂಕ | : | 30-12-2022 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 1 ರಿಂದ 10 ನೇ ತರಗತಿವರೆಗೆ ಓದುತ್ತಿರುವ ಎಸ್.ಸಿ/ಎಸ್.ಟಿ, ಒಬಿಸಿ ಮತ್ತು ಅಲ್ಪ ಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ನೀಡುತ್ತಿದ್ದ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನವನ್ನು ಇನ್ನು ಮುಂದೆ ಕೇವಲ 9 ಮತ್ತು 10 ನೇ ತರಗತಿಗೆ ಸೀಮಿತಿಗೊಳಿಸಲು ಸರ್ಕಾರ ನಿರ್ಧರಿಸಿದೆಯೇ; | ಇಲ್ಲ.<br>1 ರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಸಮಾಜ ಕಲ್ಯಾಣ ಇಲಾಖೆಯಿಂದ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುತ್ತಿದೆ. ಸದರಿ ಕಾರ್ಯಕ್ರಮವನ್ನು 9 ಮತ್ತು 10ನೇ ತರಗತಿಗೆ ಸೀಮಿತಗೊಳಿಸಿರುವುದಿಲ್ಲ.<br>ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (1 ರಿಂದ 8ನೇ ತರಗತಿ) ಕಾರ್ಯಕ್ರಮವು ರಾಜ್ಯವಲಯ ಕಾರ್ಯಕ್ರಮವಾಗಿದ್ದು, ಕಾರ್ಯಕ್ರಮದ ಪ್ರಾರಂಭದಿಂದಲೂ ಶೇಕಡ 100 ರಷ್ಟು ಅನುದಾನವನ್ನು ರಾಜ್ಯ ಸರ್ಕಾರವೇ ಭರಿಸಲಾಗುತ್ತಿದೆ. ಮುಂದುವರೆದು, ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (9 ಮತ್ತು 10ನೇ ತರಗತಿ) ಕಾರ್ಯಕ್ರಮವು ಕೇಂದ್ರ ಪುರಸ್ಕೃತ ಕಾರ್ಯಕ್ರಮವಾಗಿದ್ದು, ಕೇಂದ್ರ ಸರ್ಕಾರವು ಶೇಕಡ 60 ಹಾಗೂ ರಾಜ್ಯ ಸರ್ಕಾರ ಶೇಕಡ 40 ರಷ್ಟು ಅನುಪಾತದಲ್ಲಿ ಅನುದಾನ ಹಂಚಿಕೆ ಮಾಡಿ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುತ್ತಿದೆ. |
| ಆ) | ಸೀಮಿತಗೊಳಿಸಿದ್ದಲ್ಲಿ, ಇದಕ್ಕೆ ಇರುವ ಕಾರಣಗಳೇನು; (ಸಂಪೂರ್ಣ ವಿವರ ನೀಡುವುದು) | ಅನ್ವಯಿಸುವುದಿಲ್ಲ. |
| ಇ) | ರಾಜ್ಯದಲ್ಲಿ ಈ ಆದೇಶ ಪ್ರಸಕ್ತ ಸಾಲಿನಿಂದಲೇ ಜಾರಿಯಾಗಲಿದೆಯೇ; ಅಥವಾ ಎಂದಿನಿಂದ ಜಾರಿಗೆ ಬರಲಿದೆ; | |
| ಈ) | 1 ರಿಂದ 10 ನೇ ತರಗತಿಯವರೆಗಿನ ವಿದ್ಯಾರ್ಥಿಗಳಿಗೆ ನೀಡುತ್ತಿದ್ದ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನದ ವಾರ್ಷಿಕ ಒಟ್ಟು ಮೊತ್ತ ಎಷ್ಟು; 9 ಮತ್ತು 10 ನೇ ತರಗತಿ ವಿದ್ಯಾರ್ಥಿಗಳಿಗೆ ಸೀಮಿತಗೊಳಿಸಿದರ ಎಷ್ಟು ಹಣ ಉಳಿತಾಯವಾಗುತ್ತದೆ; | |
| ಉ) | ವಿದ್ಯಾರ್ಥಿ ವೇತನ ಸ್ಥಗಿತಗೊಳಿಸುವುದರಿಂದ ಬಡ ಮಕ್ಕಳು ಶಾಲೆಯಿಂದ ಹೊರಗುಳಿಯುವ ಸಾಧ್ಯತೆಯಿರುವುದು ನಿಜವೇ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು? | |

**ಸಕಇ 606 ಪಕವಿ 2022**

**(ಕೋಟ ಶ್ರೀನಿವಾಸ ಪೂಜಾರಿ)**
**ಸಮಾಜ ಕಲ್ಯಾಣ ಹಾಗೂ**
**ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು**